ಅ) ಸರ್ಕಾರಿ ಶಾಲೆಗಳಿಗೆ ಮೀಸಲಿಟ್ಟ ಮಕ್ಕಳ ಆಟದ ಮೈದಾನವನ್ನು ಅತಿಕ್ರಮಿಸಿ ಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿಲ್ಲ.

ಆ) ಅನ್ವಯಿಸುವುದಿಲ್ಲ. ಆದಾಗ್ಯೂ ಇಂತಹ ಪ್ರಕರಣಗಳನ್ನು ಸರ್ಕಾರದ ಗಮನಕ್ಕೆ ತಂದರೆ ಕೂಡಲೇ ಕ್ರಮ ತೆಗೆದುಕೊಳ್ಳಲಾಗುವುದು.

ಶಿಕ್ಷಣ ಇಲಾಖೆಯ ಪುನರಚನೆ

139 - ಶ್ರೀ ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಸಮಗ್ರ ಪುನರ್ ರಚನೆ ಬಗ್ಗೆ ಸರ್ಕಾರ ಏನಾದರೂ ಯೋಚಿಸಿದೆಯೇ?

ಆ) ಹಾಗೆ ಯೋಚಿಸಿದ್ದಲ್ಲಿ ಶಿಕ್ಷಣ ಮತ್ತು ಶಿಕ್ಷಣ ಇಲಾಖೆಯ ಗುಣಮಟ್ಟ ಸುಧಾರಿಸುವ ಬಗ್ಗೆ ಶಿಕ್ಷಣ ತಜ್ಞರ ಅಭಿಪ್ರಾಯ ಪಡೆಯಲಾಗಿದೆಯೇ?

ಇ) ಮುಖ್ಯಮಂತ್ರಿಗಳು ಹಿಂದೆ ಶಿಕ್ಷಣ ಸಚಿವರಾಗಿದ್ದಾಗ ಸದನದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಪುನರ್ ರಚನೆ ಬಗ್ಗೆ ನೀಡಿದ ಭರವಸೆ ಈಡೇರಿದೆಯೇ?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು

ಆ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ವಿವಿಧ ಸಂಘಸಂಸ್ಥೆಗಳ ಪದಾಧಿಕಾರಿಗಳ ಜೊತೆ ಚರ್ಚಿಸಿದಂತೆ ಹಾಗೂ ಅನೌಪಚಾರಿಕವಾಗಿ ಶಿಕ್ಷಣ ತಜ್ಞರ ಅಭಿಪ್ರಾಯವನ್ನು ಸಹ ಪಡೆದು ಪರಿಶೀಲಿಸಿ ಕ್ರಮ ಜರುಗಿಸಲಾಗುತ್ತಿದೆ.

ಇ) ಸರ್ಕಾರವು ಪ್ರಥಮ ಹಂತವಾಗಿ ಆದೇಶ ಸಂಖ್ಯೆ ಇಡಿ 736 ಡಿಪಿಐ 91 ದಿನಾಂಕ 26-07-1994ರಲ್ಲಿ ಲಿಪಿಕ ವೃಂದವನ್ನು ಪುನರ್ ರಚಿಸಿದೆ. ಉಳಿದ ಪ್ರಸ್ತಾವನೆಯನ್ನು ಪರಿಶೀಲಿಸಿ ಅತಿ ಶೀಘ್ರದಲ್ಲಿ ಜಾರಿಗೊಳಿಸಲಾಗುವುದು.

ಉಡುಪಿ ತಾಲ್ಲೂಕು ಹೊಸೂರು ಕರ್ಜೆಯ ಆಯುರ್ವೇದ ಡಿಸ್ಪೆನ್ಸರಿಯನ್ನು ಮೇಲ್ದರ್ಜೆಗೆ ಏರಿಸುವುದು

243 - ಶ್ರೀ ಪಿ. ಬಸವರಾಜ್ (ಬ್ರಹ್ಮಾವರ) : ಮಾನ್ಯ ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ತಾಲ್ಲೂಕು ಹೊಸೂರು ಕರ್ಜೆಯಲ್ಲಿನ ಆಯುರ್ವೇದ ಗ್ರಾಮಾಂತರ ಡಿಸ್ಪೆನ್ಸರಿಯನ್ನು 6 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನದಲ್ಲಿದೆಯೇ?

ಆ) ಮೇಲ್ದರ್ಜೆಗೇರಿಸುವ ಬಗ್ಗೆ ಬೇಕಾಗುವ ಕಟ್ಟಡ, ನೀರು, ವಿದ್ಯುತ್‌ಶಕ್ತಿ ಸೌಲಭ್ಯ ಸದರಿ ಡಿಸ್ಪೆನ್ಸರಿಯಲ್ಲಿ ಈಗಾಗಲೇ ಇರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಮೇಲ್ದರ್ಜೆಗೇರಿಸುವ ಕ್ರಮವನ್ನು ಯಾವಾಗ ಕೈಗೊಳ್ಳಲಾಗುವುದು?

ಶ್ರೀಮತಿ ಸುಮ ವಸಂತ (ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಸಚಿವರು) :